**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಬಂಗಾರಪೇಟೆ**

**ಸಿಸಿ ಸಂಖ್ಯೆ:** 307/2020 **CW**-2 **PW**-1

**ಸಾಕ್ಷಿಯನ್ನು ದಿಃ 16.02.2023 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| **ಹೆಸರುಃ** | ಸೋಮಪ್ಪ |
| **ತಂದೆ ಹೆಸರುಃ** | ದ್ಯಾವರಪ್ಪ |
| **ವಯಸ್ಸುಃ** | 41 ವರ್ಷ |
| **ವೃತ್ತಿಃ** | ಚಾಲಕ |
| **ವಾಸ ಸ್ಥಳಃ** | ದೇಶಿಹಳ್ಳಿ |

**ಮುಖ್ಯವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಚಾಸಾ 1,3 ಮತ್ತು 4 ರವರ ಪರಿಚಯ ಇರುವುದಿಲ್ಲ . ಈಗ್ಗೆ 2 ವರ್ಷಗಳ ಹಿಂದೆ ನಾನು ಬಂಗಾರಪೇಟೆಯಿಂದ ಬೂದಿಕೋಟೆ ಕಡೆಗೆ ಹೋಗುತ್ತಿದ್ದೆನು, ನಾನು ಹುಣಸನಹಳ್ಳಿ ರೈಲ್ವೇ ಗೇಟ್ ಬಳಿ ಬಂದಾಗ ಅಲ್ಲಿ ಒಂದು ದ್ವಿಚಕ್ರ ವಾಹನ ಹೋಗುತ್ತಿದ್ದು, ಸದರಿ ದ್ವಿಚಕ್ರ ವಾಹನವನ್ನು ಅದರ ಸವಾರ ರೈಲ್ವೇ ಗೇಟ್ ನ ಕಂಬಿಗೆ ಡಿಕ್ಕಿ ಪಡಿಸಿದೆನು, ಇದರಿಂದ ಸದರಿ ವಾಹನದಲ್ಲಿದ್ದ ಮೂರು ಜನರು ಬಿದ್ದು ಗಾಯಗೊಂಡಿರುತ್ತಾರೆ. ಅವರ ಹೆಸರು ಗೊತ್ತಿರುವುದಿಲ್ಲ. ಸದರಿ ಸ್ಥಳದಲ್ಲಿ ಒಂದು ನೀರಿನ ಟ್ರ್ಯಾಕ್ಟರ್ ಬರುತ್ತಿತ್ತು. ಸದರಿ ಟ್ರ್ಯಾಕ್ಟರ್ ಚಾಲಕನ ತಪ್ಪಿನಿಂದ ಅಪಘಾತವಾಗಿರುವುದಿಲ್ಲ . ನಾನು ಪೋಲೀಸರು ಮುಂದೆ ಟ್ರ್ಯಾಕ್ಟರ್ ಚಾಲಕನ ತಪ್ಪಿನಿಂದ ಅಪಘಾತವಾಗಿರುತ್ತದೆ ಎಂದು ಹೇಳಿಕೆ ಕೊಟ್ಟಿರುವುದಿಲ್ಲ. ನಾನು ಟ್ರ್ಯಾಕ್ಟರ್ ಚಾಲಕನನ್ನು ನೋಡಿರುವುದಿಲ್ಲ.

ಸಾಕ್ಷಿಯು ಮಹಜರ್ ನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಮಹಜರ್ ನಿಪಿ-1 ಎಂದು ಗುರುತಿಸಲಾಯಿತು, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಈಗ್ಗೆ 3 ವರ್ಷಗಳ ಹಿಂದೆ ರೈಲ್ವೇ ಗೇಟ್ ಬಳಿಯೇ ಮಾಡಿರುತ್ತೇನೆ. ಆದರೆ ಪೋಲೀಸರು ನನ್ನ ಸಮಕ್ಷಮ ಯಾವುದೇ ಪಂಚಾನಮೆ ಮಾಡಿಲ್ಲ ಮತ್ತು ಟ್ರ್ಯಾಕ್ಟರ್ ನ್ನು ಜಪ್ತಿ ಮಾಡಿರುವುದಿಲ್ಲ.

**(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಎಪಿಪಿರವರು ಕೋರಿರುತ್ತಾರೆ. ಅದರಂತೆ ಅನುಮತಿ ನೀಡಿದೆ.)**

**ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಟ್ರ್ಯಾಕ್ಟರ್ ಚಾಲಕ ಅತಿವೇಗವಾಗಿ ಮತ್ತು ಅಜಾಗೂರುಕತೆಯಿಂದ ಚಾಲನೆ ಮಾಡಿ ದ್ವಿಚಕ್ರ ವಾಹನಕ್ಕೆ ಡಿಕ್ಕಿ ಪಡಿಸಿದ ಕಾರಣ ಅಪಘಾತವಾಗಿರುತ್ತದೆ ಎಂದರೆ ಸರಿಯಲ್ಲ. ನಾನು ಪೋಲೀಸರ ಮುಂದೆ ಆರೋಪಿಯ ತಪ್ಪಿನಿಂದಲೇ ಅಪಘಾತವಾಗಿರುತ್ತದೆ ಎಂದು ಹೇಳಿಕೆ ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ನಾನು ಆ ದಿನ ಟ್ರ್ಯಾಕ್ಟರ್ ಚಾಲಕನನ್ನು ನೋಡಿ ಗುರುತಿಸಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆ ಭಾಗವನ್ನು ನಿಪಿ -2 ಎಂದು ಗುರುತಿಸಲಾಯಿತು. ಪೋಲೀಸರು ದಿನಾಂಕ 21.01.2020 ರಂದು ಅಪಘಾತ ಸ್ಥಳದಲ್ಲಿ ನನ್ನ ಸಮಕ್ಷಮ ನಿಪಿ -1ರಂತೆ ಸ್ಥಳ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ಪೋಲೀಸರು ದ್ವಿಚಕ್ರ ವಾಹನ ಮತ್ತು ಟ್ರ್ಯಾಕ್ಟರ್ ನ್ನು ಜಪ್ತಿ ಮಾಡಿರುತ್ತಾರೆ ಎಂದರೆ ಸರಿಯಲ್ಲ ಈಗ ನಾನು ಆರೋಪಿ ಜೊತೆ ಸೇರಿ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ ಇಲ್ಲಾ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ).

ಓ ಹೇ ಕೇ ಸರಿ ಇದೆ.

**Sd/-**

**(ಕೇಶವಮೂರ್ತಿ.ಬಿ)**

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು

ಜೆ.ಎಂ.ಎಫ್.ಸಿ., ಬಂಗಾರಪೇಟೆ

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಬಂಗಾರಪೇಟೆ**

**ಸಿಸಿ ಸಂಖ್ಯೆ:** 307/2020 **CW**–3 **PW**–2

**ಸಾಕ್ಷಿಯನ್ನು ದಿಃ 16.02.2023 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| **ಹೆಸರುಃ** | ಪ್ರದೀಪ್ ಕುಮಾರ್ |
| **ತಂದೆ ಹೆಸರುಃ** | ಕುಮಾರ್ |
| **ವಯಸ್ಸುಃ** | 42 ವರ್ಷ |
| **ವೃತ್ತಿಃ** | ಖಾಸಗಿ ಉದ್ಯೋಗಿ |
| **ವಾಸ ಸ್ಥಳಃ** | ಬಂಗಾರಪೇಟೆ |

**ಮುಖ್ಯವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಚಾಸಾ 1,2 ಮತ್ತು 4 ರವರ ಪರಿಚಯ ಇರುವುದಿಲ್ಲ . ನಾನು ಅಪಘಾತವನ್ನು ನೋಡಿರುವುದಿಲ್ಲ. ಅಪಘಾತ ನೋಡಿರುವುದಾಗಿ ಪೋಲೀಸರ ಮುಂದೆ ಹೇಳಿಕೆ ಕೊಟ್ಟಿರುವುದಿಲ್ಲ.

ಸಾಕ್ಷಿಯು ಮಹಜರ್ ನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಮಹಜರ್ ನ್ನು ಈಗಾಗಲೇ ನಿಪಿ–1 ಎಂದು ಗುರುತಿಸಲಾಗಿದೆ , ಸಾಕ್ಷಿಯ ಸಹಿಯನ್ನು ನಿಪಿ–1(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಈಗ್ಗೆ 3 ವರ್ಷಗಳ ಹಿಂದೆ ರೈಲ್ವೇ ಗೇಟ್ ಬಳಿಯೇ ಮಾಡಿರುತ್ತೇನೆ. ಆದರೆ ಪೋಲೀಸರು ನನ್ನ ಸಮಕ್ಷಮ ಯಾವುದೇ ಪಂಚಾನಮೆ ಮಾಡಿಲ್ಲ ಮತ್ತು ಟ್ರ್ಯಾಕ್ಟರ್ ನ್ನು ಜಪ್ತಿ ಮಾಡಿರುವುದಿಲ್ಲ.

**(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಎಪಿಪಿರವರು ಕೋರಿರುತ್ತಾರೆ. ಅದರಂತೆ ಅನುಮತಿ ನೀಡಿದೆ.)**

**ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಟ್ರ್ಯಾಕ್ಟರ್ ಚಾಲಕ ಅತಿವೇಗವಾಗಿ ಮತ್ತು ಅಜಾಗೂರುಕತೆಯಿಂದ ಚಾಲನೆ ಮಾಡಿ ದ್ವಿಚಕ್ರ ವಾಹನಕ್ಕೆ ಡಿಕ್ಕಿ ಪಡಿಸಿದ ಕಾರಣ ಅಪಘಾತವಾಗಿರುತ್ತದೆ ಎಂದರೆ ಸರಿಯಲ್ಲ. ನಾನು ಪೋಲೀಸರ ಮುಂದೆ ಆರೋಪಿಯ ತಪ್ಪಿನಿಂದಲೇ

ಅಪಘಾತವಾಗಿರುತ್ತದೆ ಎಂದು ಹೇಳಿಕೆ ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ನಾನು ಆ ದಿನ ಟ್ರ್ಯಾಕ್ಟರ್ ಚಾಲಕನನ್ನು ನೋಡಿ ಗುರುತಿಸಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆ ಭಾಗವನ್ನು ನಿಪಿ -3 ಎಂದು ಗುರುತಿಸಲಾಯಿತು. ಪೋಲೀಸರು ದಿನಾಂಕ 21.01.2020 ರಂದು ಅಪಘಾತ ಸ್ಥಳದಲ್ಲಿ ನನ್ನ ಸಮಕ್ಷಮ ನಿಪಿ -1ರಂತೆ ಸ್ಥಳ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ಪೋಲೀಸರು ದ್ವಿಚಕ್ರ ವಾಹನ ಮತ್ತು ಟ್ರ್ಯಾಕ್ಟರ್ ನ್ನು ಜಪ್ತಿ ಮಾಡಿರುತ್ತಾರೆ ಎಂದರೆ ಸರಿಯಲ್ಲ ಈಗ ನಾನು ಆರೋಪಿ ಜೊತೆ ಸೇರಿ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ ಇಲ್ಲಾ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ).

ಓ ಹೇ ಕೇ ಸರಿ ಇದೆ.

**Sd/-**

**(ಕೇಶವಮೂರ್ತಿ.ಬಿ)**

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು

ಜೆ.ಎಂ.ಎಫ್.ಸಿ., ಬಂಗಾರಪೇಟೆ